ಕರ್ನಾಟಕ ಸರ್ಕಾರ
ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಇಲಾಖೆ,
ನಂ.8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-560052.
ದೂರವಾಣಿ ಸಂಖ್ಯೆ: 080-22374931 ಇ-ಮೇಲ್: jdcsca.fcs-ka@nic.in
ddfcsca@gmail.com

ಸಂಖ್ಯೆ: FCSCA-CSCA/LPG/32/2023-24 ದಿನಾಂಕ: 18/06/2026.

ಇವರಿಗೆ:-

ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
ಹಾಗೂ ಜಿಲ್ಲಾ ದಂಡಾಧಿಕಾರಿಗಳು.

ಮಾನ್ಯರೇ,

ವಿಷಯ:- ವಿಸ್ತಾರ ಅಭಿವೃದ್ಧಿ ಸ್ವಸಹಾಯ ಸಂಘ, ಕೆಂಗೇರಿ, ಬೆಂಗಳೂರು-560060 ಸಂಘದ ವತಿಯಿಂದ ಸಾರ್ವಜನಿಕರಲ್ಲಿ ಗ್ಯಾಸ್ ಸುರಕ್ಷತಾ ಜಾಗೃತಿ ಅಭಿಯಾನ ನಡೆಸುತ್ತಿರುವ ಬಗ್ಗೆ.

ಉಲ್ಲೇಖ:-
1) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳ ಪತ್ರಸಂ:ಆನಾಸ&ಗ್ರಾವ್ಯ :ಆಕಾ: ಟಿ:814:2026 ದಿನಾಂಕ: 11/05/2026.
2) ಈ ಕಛೇರಿ ಪತ್ರ ಸಂಖ್ಯೆ: FCSCA-CSCA/LPG/6/23-24 (Bidar) ದಿನಾಂಕ: 13-10-2025.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ಪತ್ರದೊಂದಿಗೆ ವಿಸ್ತಾರ ಅಭಿವೃದ್ಧಿ ಸ್ವಸಹಾಯ ಸಂಘ (ರಿ), ಕೆಂಗೇರಿ, ಬೆಂಗಳೂರು ಇದರ ಅಧ್ಯಕ್ಷರು ಸಲ್ಲಿಸಿರುವ ಮನವಿಯನ್ನು ಲಗತ್ತಿಸಿ ಕಳುಹಿಸಿ, ಸದರಿ ಮನವಿಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.

ವಿಸ್ತಾರ ಅಭಿವೃದ್ಧಿ ಸ್ವಸಹಾಯ ಸಂಘ (ರಿ) ಕಳೆದ ಹತ್ತು ವರ್ಷಗಳಿಂದ ಸಮಾಜಮುಖಿ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, ಮಹಿಳಾ ಸ್ವಸಹಾಯ ಸಂಘಗಳ ರಚನೆ ಹಾಗೂ ವಿವಿಧ ಜನಜಾಗೃತಿ ಕಾರ್ಯಕ್ರಮಗಳನ್ನು ರಾಜ್ಯದ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದ್ದು, ಈ ಕಾರ್ಯಕ್ರಮಗಳಡಿ ಗ್ಯಾಸ್ ಬಳಕೆಯ ಸುರಕ್ಷತಾ ಕ್ರಮಗಳು, ನಿರ್ವಹಣಾ ವಿಧಾನಗಳು, ಮುನ್ನೆಚ್ಚರಿಕೆ ಕ್ರಮಗಳು, ತುರ್ತು ಪರಿಸ್ಥಿತಿಯಲ್ಲಿ ಕೈಗೊಳ್ಳಬೇಕಾದ ಕ್ರಮಗಳು, ನೇರ ಪ್ರದರ್ಶನಗಳು, ಸಮೀಕ್ಷೆಗಳು ಹಾಗೂ ಸಾರ್ವಜನಿಕ ಜಾಗೃತಿ ಅಭಿಯಾನಗಳನ್ನು ನಡೆಸುವ ಉದ್ದೇಶ ಹೊಂದಿರುವುದಾಗಿ ಸಂಘವು ಮನವಿಯಲ್ಲಿ ತಿಳಿಸಿರುತ್ತಾರೆ.

ಪ್ರಸ್ತುತ, ಗೃಹಬಳಕೆಯ ಗ್ಯಾಸ್ ಸಿಲಿಂಡರ್‌ಗಳ ಬಳಕೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಗ್ಯಾಸ್ ಸೋರಿಕೆ, ಅಗ್ನಿ ಅವಘಡಗಳು, ನಿರ್ಲಕ್ಷ್ಯದಿಂದ ಉಂಟಾಗುವ ಸ್ಫೋಟಗಳು ಹಾಗೂ ಇದರಿಂದ ಸಂಭವಿಸುವ ಜೀವ ಮತ್ತು ಆಸ್ತಿ ನಷ್ಟಗಳ ಪ್ರಮಾಣವೂ ಹೆಚ್ಚುತ್ತಿರುವುದು ಕಂಡು ಬಂದಿರುತ್ತದೆ. ಈ ಸಂಬಂಧಿತ ಅವಘಡಗಳ ಪ್ರಕರಣಗಳು ಮಾಧ್ಯಮಗಳಲ್ಲಿ ಹೆಚ್ಚಾಗಿ ವರದಿಯಾಗುತ್ತಿರುವುದು ಗಮನಾರ್ಹವಾಗಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಸುರಕ್ಷಿತ ಗ್ಯಾಸ್

ಬಳಕೆಯ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಜಿಲ್ಲೆಗಳು, ತಾಲ್ಲೂಕುಗಳು, ಗ್ರಾಮಗಳು ಹಾಗೂ ನಗರ ಪ್ರದೇಶಗಳಲ್ಲಿ ಮನೆ-ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸುವುದು ಅತ್ಯವಶ್ಯಕವಾಗಿದೆ.

ಉಲ್ಲೇಖ(2)ರ ಪತ್ರದಲ್ಲಿ ಗೃಹ ಬಳಕೆ ಅನಿಲ ಸಿಲಿಂಡರ್ ಉಪಯೋಗಿಸಲು ಸುರಕ್ಷತಾ ಕ್ರಮಗಳ ಕುರಿತು ಸಾರ್ವಜನಿಕರಲ್ಲಿ, ತೈಲ ಕಂಪನಿಗಳ ಮತ್ತು ಅನಿಲ ವಿತರಕರುಗಳ ಸಹಯೋಗದೊಂದಿಗೆ ನಿಯಮಿತವಾಗಿ ಅರಿವು ಮೂಡಿಸಲು ಈಗಾಗಲೇ ತಿಳಿಸಲಾಗಿರುತ್ತದೆ.

ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ಜಿಲ್ಲೆಗಳ ಸಾರ್ವಜನಿಕರಲ್ಲಿ ಸುರಕ್ಷತಾ ಅರಿವು ಮೂಡಿಸುವಲ್ಲಿ ವಿಸ್ತಾರ ಅಭಿವೃದ್ಧಿ ಸ್ವಸಹಾಯ ಸಂಘ (ರಿ) ಹಮ್ಮಿಕೊಳ್ಳುವ ಜಾಗೃತಿ ಕಾರ್ಯಕ್ರಮಗಳಿಗೆ ಅಗತ್ಯ ಮಾರ್ಗದರ್ಶನ, ತಾಂತ್ರಿಕ ಸಲಹೆ ಹಾಗೂ ಸಹಕಾರ ನೀಡುವಂತೆ ಈ ಮೂಲಕ ತಿಳಿಸಿದೆ.

ಅದರೊಂದಿಗೆ, ಶಾಲಾ ಗ್ರಾಹಕರ ಕ್ಲಬ್‌ಗಳು, ಜಿಲ್ಲಾ ಮಟ್ಟದಲ್ಲಿ ಆಚರಿಸಲಾಗುವ ಗ್ರಾಹಕರ ಚಟುವಟಿಕೆಗಳು ಹಾಗೂ ಇತರೆ ಗ್ರಾಹಕ ಜಾಗೃತಿ ಕಾರ್ಯಕ್ರಮಗಳಲ್ಲಿಯೂ ಗ್ಯಾಸ್ ಸುರಕ್ಷತೆ ಕುರಿತು ಅರಿವು ಮೂಡಿಸಲು ವಿಸ್ತಾರ ಅಭಿವೃದ್ಧಿ ಸ್ವಸಹಾಯ ಸಂಘ (ರಿ) ರವರೊಂದಿಗೆ ಸಮನ್ವಯ ಸಾಧಿಸಿ ಗ್ಯಾಸ್ ಸಿಲಿಂಡರ್ ಬಳಕೆಯ ಕುರಿತು ಗ್ರಾಹಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸೂಚಿಸಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ಆಯುಕ್ತರು,
ಆಹಾರ, ನಾಗರಿಕ ಸರಬರಾಜು ಹಾಗೂ
ಗ್ರಾಹಕ ವ್ಯವಹಾರಗಳ ಇಲಾಖೆ,
ಬೆಂಗಳೂರು.

ಪ್ರತಿಯನ್ನು:

1) ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ, ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
2) ರಾಜ್ಯದ ಎಲ್ಲಾ ಜಿಲ್ಲೆ/ವಲಯಗಳ ಜಂಟಿ/ಉಪ ನಿರ್ದೇಶಕರುಗಳು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ರವರುಗಳಿಗೆ ಅಗತ್ಯ ಕ್ರಮಕ್ಕಾಗಿ.
3) ವಿಸ್ತಾರ ಅಭಿವೃದ್ಧಿ ಸ್ವಸಹಾಯ ಸಂಘ(ರಿ), ಸಂ.4, 3ನೇ ಅಡ್ಡ ರಸ್ತೆ, ಹಟ್ಟಿ ಲಕ್ಕಮ್ಮ ದೇವಸ್ಥಾನದ ಹತ್ತಿರ, ಹರ್ಷ ಲೇಔಟ್, ಕೆಂಗೇರಿ, ಬೆಂಗಳೂರು – 560060 ರವರಿಗೆ ಅಗತ್ಯ ಕ್ರಮಕ್ಕಾಗಿ.

ಆಯುಕ್ತರು. ಆಹಾರ. ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ. ಬೆಂಗಳೂರು – 560 052.

ಬಿಬಿಎಂಪಿ ನೋ. ಸಂಖ್ಯೆ..... ಶಾಖೆ.....
ಸಹಾಯಕ ಆಯುಕ್ತರು.